## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಚಂದ್ರಹಾಸ, ಕಾರ್ಯದರ್ಶಿ, ಗ್ರೇಡ್-2 ಎಂ.ಸಿ. ಹಳ್ಳಿ ಗ್ರಾಮ ಪಂಚಾಯಿತಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ.

**ಓದಲಾಗಿದೆ:** ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಅ.ಸ.ಪ.ಸಂ/ಕಂಪ್ಲೇಂಟ್/ಉಪಲೋಕ್/ಎಮ್‌ವೈಎಸ್1759/2021/ಪಿಓ ಎಆರ್‌ಇ-1, ದಿನಾಂಕ:21.04.2022.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರದೊಂದಿಗೆ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ:07.07.2021 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಚಂದ್ರಹಾಸ, ಕಾರ್ಯದರ್ಶಿ, ಗ್ರೇಡ್-2, ಎಂ.ಸಿ. ಹಳ್ಳಿ ಗ್ರಾಮ ಪಂಚಾಯಿತಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ). ಇವರು ದೂರುದಾರರಾದ ಶ್ರೀ ಶಾಂತಕುಮಾರ್ ಬಿನ್ ಶಂಕರೇಗೌಡ, ಎಂ.ಸಿ.ಹಳ್ಳಿ, ಕಸಬಾ ಹೋಬಳಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ. ಇವರಿಂದ ಮನೆಯ ಬಾಬ್ತು ಫಾರಂ-9 ಮತ್ತು 11 ನ್ನು ಕೊಡಲು ರೂ. 3,000/- ಗಳ ಲಂಚದ ಹಣಕ್ಕೆ ಬೇಡಿಕೆಯಿಟ್ಟು ರೂ. 1,000/-ಗಳ ಲಂಚದ ಹಣವನ್ನು ಸ್ವೀಕರಿಸಿರುವ ಸಂದರ್ಭದಲ್ಲಿ ದಿ:14.06.2017 ರಂದು ಭ್ರಷ್ಟಾಚಾರ ನಿಗ್ರಹದಳ (ಎ.ಸಿ.ಬಿ) ಇವರಿಂದ ಟ್ರಾಪ್‌ಗೆ ಒಳಗಾಗಿರುತ್ತಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 7(2)ರನ್ವಯ ಸ್ವಯಂ ಪ್ರೇರಿತ ತನಿಖೆ ಕೈಗೊಂಡಿದ್ದು, ತನಿಖಾ ವರದಿಯಲ್ಲಿ ಎದುರುದಾರರು ನೀಡಿರುವ ಸಮಜಾಯಿಷಿಯನ್ನು ಈ ಹಂತದಲ್ಲಿ ಪರಿಗಣಿಸಲು ಬರುವುದಿಲ್ಲ ಹಾಗೂ ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ. ಹಾಗಾಗಿ ಇವರ ವಿರುದ್ಧ ವಿಚಾರಣೆ ಮಾಡದೆ ಇರಲು ಸೂಕ್ತ ಕಾರಣಗಳು ಕಂಡುಬಂದಿರುವುದಿಲ್ಲ ಎಂಬುದಾಗಿ ತಿಳಿಸುತ್ತಾ, ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರಿಸದೆ, ಸರ್ಕಾರಿ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವತನೆ/ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದು, ಎದುರುದಾರರು ತಮ್ಮ ಕರ್ತವ್ಯದಲ್ಲಿ ಸಂಪೂರ್ಣ ನಿಷ್ಠೆಯನ್ನು ಪಾಲಿಸದೇ, ಕರ್ತವ್ಯ ಶ್ರದ್ಧೆಯನ್ನು ಹೊಂದಿರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು, ಭ್ರಷ್ಟಾಚಾರವೆಸಗಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ (ಪ್ರಸ್ತುತ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 2021) ನಿಯಮ 3(1)(i) ರಿಂದ (iii) ರನ್ವಯ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದಾಗಿ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರಡಿ ವರದಿ ಸಲ್ಲಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಆಪಾದಿತ ಸರ್ಕಾರಿ ನೌಕರರು ಕಾರ್ಯನಿರ್ವಹಣೆಯಲ್ಲಿ ಕರ್ತವ್ಯಲೋಪವೆಸಗಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1) (i) ಮತ್ತು (iii) ರ ಅಡಿಯಲ್ಲಿ ದುರ್ನಡತೆಯೆಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದು, ಈ ಪ್ರಕರಣದಲ್ಲಿ

. . .2

(8)



ಒಳಗೊಂಡಿರುವ ನೌಕರನ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ನಿರ್ಧರಿಸಿ, ಅದರಂತೆ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 103 ಗ್ರಾಪಂಕಾ 2022 ಬೆಂಗಳೂರು, ದಿನಾಂಕ:23.06.2022.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಚಂದ್ರಹಾಸ, ಕಾರ್ಯದರ್ಶಿ, ಗ್ರೇಡ್-2 ಎಂ.ಸಿ. ಹಳ್ಳಿ ಗ್ರಾಮ ಪಂಚಾಯಿತಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 23/06/22
(ಬಿ.ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ,</u>**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಹಿಂದಿರುಗಿಸಿದೆ. ಪುಟ ಸಂಖ್ಯೆ: 1 ರಿಂದ 120).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಮಗಳೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
6. ಶ್ರೀ ಚಂದ್ರಹಾಸ, ಕಾರ್ಯದರ್ಶಿ, ಗ್ರೇಡ್-2 ಎಂ.ಸಿ. ಹಳ್ಳಿ ಗ್ರಾಮ ಪಂಚಾಯಿತಿ, ತರೀಕೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.